**Akashvani : Bangalore**
**National Bulletin In Kannada**
**30.10.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**30.10.2024 / 7.35 am**

**<><*<><>*><>**

ಮುಖ್ಯಾಂಶಗಳು

**೧. ಇಂದಿನಿಂದ ಎರಡು ದಿನಗಳ ಗುಜರಾತ್ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ**

**೨. ಬೆಂಗಳೂರಿನ ಬೊಮ್ಮಸಂದ್ರ ಹಾಗೂ ನರಸಾಪುರದಲ್ಲಿ ಎರಡು ಇ.ಎಸ್.ಐ ಆಸ್ಪತ್ರೆಗಳ ಲೋಕಾರ್ಪಣೆ**

**೩. ದೀಪಾವಳಿ ಸಂದರ್ಭದಲ್ಲಿ ಪಟಾಕಿ ಅನಾಹುತ ತಪ್ಪಿಸಲು ದೇಶದ ಪ್ರಮುಖ ಆಸ್ಪತ್ರೆಗಳಲ್ಲಿ ಮುನ್ನೆಚ್ಚರಿಕಾ ಕ್ರಮ**

**೪. ಮಹಿಳಾ ಕ್ರಿಕೆಟ್; ನ್ಯೂಜಿಲೆಂಡ್ ವಿರುದ್ಧ ಗೆದ್ದು ೨-೧ ಅಂತರದಲ್ಲಿ ಸರಣಿ ಕೈವಶ ಮಾಡಿಕೊಂಡ ಭಾರತ**

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ಕಾಲ ಗುಜರಾತ್ ಗೆ ಭೇಟಿ ನೀಡಲಿದ್ದಾರೆ. ಏಕ್ತಾ ನಗರದಲ್ಲಿ ಅವರು ೨೮೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಿಲಾನ್ಯಾಸ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಪ್ರವಾಸೋದ್ಯಮ ಕ್ಷೇತ್ರದಲ್ಲಿ ಅನುಭವ ಹೆಚ್ಚಿಸುವ, ಸೌಲಭ್ಯಗಳ ಸುಧಾರಣೆಗೆ ಸಂಬಂಧಿಸಿದ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಆರಂಭ ೬.೦ಯಡಿ ತರಬೇತಿ ಪಡೆದ ೯೯ ನೇ ಬ್ಯಾಚ್ ನ ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಒಟ್ಟು ೬೫೩ ಅಧಿಕಾರಿಗಳು ಇಲ್ಲಿ ತರಬೇತಿ ಪಡೆದಿದ್ದು, ಇದರಲ್ಲಿ ೧೬ ಭಾರತೀಯ ನಾಗರಿಕ ಸೇವೆಗಳು ಮತ್ತು ಮೂರು ಭೂತಾನ್ ನಾಗರಿಕ ಸೇವೆಗೆ ಸಂಬಂಧಿಸಿದ ಅಧಿಕಾರಿ ವರ್ಗ ಸೇರಿವೆ. ಈ ತರಬೇತಿ ಕಾರ್ಯಕ್ರಮದ ಘೋಷವಾಕ್ಯವೆಂದರೆ, 'ಸ್ವಾವಲಂಬಿ ಭಾರತಕ್ಕೆ ಮಾರ್ಗ ನಕ್ಷೆ ಮತ್ತು ವಿಕಸಿತ ಭಾರತ' ಎಂಬುದಾಗಿದೆ.

**<><*<><>*><>**

ಅಖಿಲ ಭಾರತ ಆಯುರ್ವೇದ ಸಂಸ್ಥೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ೧೨ ಸಾವಿರದ ೮೫೦ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಬಹು ಆರೋಗ್ಯ ಯೋಜನೆಗಳಿಗೆ ಚಾಲನೆ ನೀಡಿದರು. ರಾಷ್ಟ್ರವ್ಯಾಪಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಖಾತ್ರಿಪಡಿಸುವ ಪ್ರಧಾನ ಮಂತ್ರಿಯವರ ದೃಷ್ಟಿಕೋನದಿಂದ ಸಂಯೋಜಿಸಲಾಗಿದೆ. ಗಮನಾರ್ಹವಾಗಿ, ಇವುಗಳಲ್ಲಿ ಏಳು ಯೋಜನೆಗಳು ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ಅಡಿಯಲ್ಲಿ ನೌಕರರ ರಾಜ್ಯ ವಿಮಾ ನಿಗಮಕ್ಕೆ ಸಂಬಂಧಿಸಿವೆ. ಇದು ಕಾರ್ಮಿಕರು ಮತ್ತು ಅವರ ಕುಟುಂಬಗಳ ವ್ಯಾಪಕ ವಲಯಗಳಿಗೆ ಪ್ರಯೋಜನವನ್ನು ನೀಡಲಿದೆ.

ಮಧ್ಯ ಪ್ರದೇಶದ ಇಂದೋರ್ ನಲ್ಲಿ ಪ್ರಧಾನಿ ಅವರು ೭ ಇಎಸ್‌ಐಸಿ ಆಸ್ಪತ್ರೆಗಳನ್ನು ವರ್ಚುವಲ್ ಮೂಲಕ ಉದ್ಘಾಟಿಸಿದರು. ಒಟ್ಟು ೧,೬೪೧ ಕೋಟಿ ರೂಪಾಯಿ ಮೊತ್ತದ ಈ ಯೋಜನೆಗಳಿಂದ ೫೫ ಲಕ್ಷ ಇಎಸ್‌ಐ ಫಲಾನುಭವಿಗಳು ಮತ್ತು ಅವರ ಕುಟುಂಬಳಿಗೆ ಅನುಕೂಲವಾಗಲಿದೆ. ಬೆಂಗಳೂರಿನ ಬೊಮ್ಮಸಂದ್ರದಲ್ಲಿ ೨೦೦

ಹಾಸಿಗೆಗಳು ಮತ್ತು ಬೆಂಗಳೂರು ಗ್ರಾಮಾಂತರದ ನರಸಾಪುರದಲ್ಲಿ ೧೦೦ ಹಾಸಿಗೆಗಳ ಇ.ಎಸ್.ಐ ಆಸ್ಪತ್ರೆಗಳು ಇದರಲ್ಲಿ ಸೇರಿವೆ. ನಂತರ ಮಾತನಾಡಿದ ಪ್ರಧಾನಿ, ಕಳೆದ ದಶಕದಲ್ಲಿ ಭಾರತದ ಆರೋಗ್ಯ ವಲಯದಲ್ಲಿ ಹಿಂದೆಂದೂ ಕಂಡರಿಯದ ಬೆಳವಣಿಗೆಯಾಗಿದ್ದು, ಹಿಂದಿನ ಏಳು ದಶಕಗಳಲ್ಲಿ ಆಗದ ಸಾಧನೆ ಈ ಒಂದು ದಶಕದಲ್ಲಿ ಆಗಿದೆ. "ಕಳೆದ ೧೦ ವರ್ಷಗಳಲ್ಲಿ ದಾಖಲೆ ಪ್ರಮಾಣದಲ್ಲಿ ಏಮ್ಸ್ ಮತ್ತು ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗಿದೆ" ಎಂದರು.

**<><*<><>*><>**

ಬೆಳಕಿನ ಹಬ್ಬ ದೀಪಾವಳಿಯಲ್ಲಿ ಪಟಾಕಿಯಿಂದಾಗುವ ಅನಾಹುತಗಳ ತಡೆಗೆ ದೇಶಾದ್ಯಂತ ವ್ಯಾಪಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿಶೇಷವಾಗಿ ದೆಹಲಿಯ ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲು ವಿಶೇಷ ತುರ್ತು ನಿಗಾ ಘಟಕವನ್ನು ಸಜ್ಜುಗೊಳಿಸಲಾಗಿದೆ. ಏಮ್ಸ್ ಮತ್ತು ಸಫ್ದರ್ ಜಂಗ್ ಆಸ್ಪತ್ರೆಯುಲ್ಲಿಯೂ ವಿಶೇಷ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ದೇಶದ ಹಲವು ನಗರಗಳಲ್ಲಿ ಪಟಾಕಿ ಅನಾಹುತ ತಡೆಗೆ ಮುನ್ನೆಚ್ಚರಿಕೆ ಕೈಗೊಳ್ಳಾಗಿದೆ. ಈ ಬಾರಿ ಹಸಿರು ಪಟಾಕಿಗೆ ಆದ್ಯತೆ ನೀಡಿದ್ದು, ಆರಂಭಿಕ ಹಂತದಲ್ಲಿ ಪಟಾಕಿಯ ಅಬ್ಬರ ತಗ್ಗಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ರಾಮ್ ಮನೋಹರ ಲೋಹಿಯಾ ಆಸ್ಪತ್ರೆಯ ಸುಟ್ಟ ಗಾಯಗಳು ಮತ್ತು ಪ್ಲಾಸ್ಟಿಕ್ ಸರ್ಜರಿ ವಿಭಾಗದ ಮುಖ್ಯಸ್ಥ ಡಾ. ಸಮೀಕ್ ಭಟ್ಟಾಚಾರ್ಯ, ತುರ್ತು ಚಿಕಿತ್ಸೆಗಾಗಿ ೧೫ ಹಾಸಿಗೆಗಳ ವಾರ್ಡ್ ಅನ್ನು ಸಜ್ಜುಗೊಳಿಸಲಾಗಿದೆ. ಯಾವುದೇ ಸಂದರ್ಭದಲ್ಲೂ ಚಿಕಿತ್ಸೆ ನೀಡಲು ವೈದ್ಯಕೀಯ ತಂಡ ಸಿದ್ಧವಾಗಿದೆ ಎಂದರು. ಏಮ್ಸ್ ನ ತಜ್ಞ ವೈದ್ಯ ಡಾ. ಮನೀಶ್ ಸಿಂಘಾಲ್ ಮಾತನಾಡಿ, ಪಟಾಕಿ ಬಗ್ಗೆ ಮುನ್ನೆಚ್ಚರಿಕೆ ವಹಿಸುವಂತೆ ಕಿವಿ ಮಾತು ಹೇಳಿದರು. ಬೆಳಕಿನ ಹಬ್ಬ ಜನರ ಬಾಳಿನಲ್ಲಿ ಅಂಧಕಾರ ತರದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು. ಬೆಂಗಳೂರಿನ ಮಿಂಟೋ ಕಣ್ಣಾಸ್ಪತ್ರೆಯಲ್ಲೂ ಸಹ ಮುನ್ನಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಇದಕ್ಕಾಗಿ ಪರಿಣಿತರನ್ನೊಳಗೊಂಡ ತಂಡ ರಚಿಸಲಾಗಿದೆ. ಇಂದು ಬೆಳಿಗ್ಗೆ ಈ ಕುರಿತು ಮಾಹಿತಿ ನೀಡಿದ ಮಿಂಟೋ ಆಸ್ಪತ್ರೆಯ ವೈದ್ಯರಾದ ಡಾ. ರಂಜಿತಾ ಪಟಾಕಿಯಿಂದ ಯಾವುದೇ ಸಾವು - ನೋವು ಈ ವರೆಗೆ ವರದಿಯಾಗಿಲ್ಲ. ಜನತೆ ಎಚ್ಚರಿಕೆಯಿಂದ ದೀಪಾವಳಿ ಆಚರಿಸಬೇಕು ಎಂದು ಹೇಳಿದರು.

**<><*<><>*><>**

ದೆಹಲಿಯ ಜನಗಣತಿ ಭವನದ ಆವರಣದಲ್ಲಿ ನಿನ್ನೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ಪುತ್ಥಳಿ ಅನಾವರಣಗೊಳಿಸಿದರು. ಇದೇ ಸಂದರ್ಭದಲ್ಲಿ ಅವರು, ಜನನ ಮತ್ತು ಮರಣವನ್ನು ಉಚಿತವಾಗಿ ನೊಂದಣಿ ಮಾಡುವ ಮೊಬೈಲ್ ಆಪ್‌ಗೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಅಖಂಡ ಭಾರತವನ್ನು ನಿರ್ಮಿಸುವಲ್ಲಿ ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ಪಾತ್ರ ಅನನ್ಯ, ಅವರು ಸಂಘರ್ಷದ ಪ್ರತೀಕವಾಗಿದ್ದು, ರಾಷ್ಟ್ರೀಯ ಹಿತಾಸಕ್ತಿಗಾಗಿ ತ್ಯಾಗ ಮಾಡಿದ ಶ್ರೇಷ್ಠ ಮುತ್ಸದ್ಧಿಯಾಗಿದ್ದಾರೆ. ಅವರು, ಪ್ರತಿಯೊಬ್ಬರಿಗೂ ಸ್ಫೂರ್ತಿಯ ಸೆಲೆಯಾಗಿದ್ದಾರೆ ಎಂದು ಹೇಳಿದರು.

**<><*<><>*><>**

ಸೌದಿ ಅರೇಬಿಯಾಕ್ಕೆ ಪ್ರವಾಸ ಕೈಗೊಂಡಿರುವ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ನಿನ್ನೆ ರಿಯಾಧ್ ತಲುಪಿದ್ದಾರೆ. ಭಾರತ ಮತ್ತು ಸೌದಿ ಅರೇಬಿಯಾ ನಡುವಿನ ಆಳವಾದ ಪಾಲುದಾರಿಕೆಯಲ್ಲಿ ಮತ್ತಷ್ಟು ಬಲಪಡಿಸುವ ದಿಸೆಯಲ್ಲಿ ಈ ಭೇಟಿ ಮಹತ್ವ ಪಡೆದಿದೆ. ರಿಯಾದ್‌ನಲ್ಲಿ ಜಾಗತಿಕ ನಾಯಕರು, ಹೂಡಿಕೆದಾರರು ಮತ್ತು ನವೋದ್ಯಮಿಗಳನ್ನು ಒಟ್ಟುಗೂಡಿಸುವ ಪ್ರಮುಖ ವೇದಿಕೆಯಾದ ಭವಿಷ್ಯದ ಹೂಡಿಕೆ ಉಪಕ್ರಮದ ೮ ನೇ

ಆವೃತ್ತಿಯಲ್ಲಿ ಸಚಿವರು ಭಾಗವಹಿಸಲಿದ್ದಾರೆ. ಭೇಟಿಯ ಭಾಗವಾಗಿ ಅವರು, ಸೌದಿ ಅರೇಬಿಯಾದ ಕೈಗಾರಿಕಾ ಮತ್ತು ಖನಿಜ ಸಂಪನ್ಮೂಲಗಳ ಸಚಿವ ಖಾಲಿದ್ ಅಲ್-ಫಾಲಿಹ್ ಅವರೊಂದಿಗೆ ಕೈಗಾರಿಕಾ ಸಚಿವಾಲಯದಲ್ಲಿ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಬಳಿಕ ಅವರು, ಮುರಬ್ಬಾದ ರಿಯಾದ್ ಅವೆನ್ಯೂ ಮಾಲ್‌ನಲ್ಲಿರುವ ಲುಲು ಹೈಪರ್‌ಮಾರ್ಕೆಟ್‌ನಲ್ಲಿ ದೀಪಾವಳಿ ಉತ್ಸವ ಆಚರಣೆಯನ್ನು ಉದ್ಘಾಟಿಸಲಿದ್ದಾರೆ. ಮಧ್ಯಾಹ್ನ ಸಚಿವರು ಇಂಧನ ಸಚಿವಾಲಯದಲ್ಲಿ ಆರ್ಥಿಕ ಮತ್ತು ಹೂಡಿಕೆ ಸಂಬಂಧಿತ ಸಚಿವರ ಮಟ್ಟದ ಸಭೆಯ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ಈ ನಿರ್ಣಾಯಕ ಚರ್ಚೆಯು ಕೈಗಾರಿಕಾ ಬೆಳವಣಿಗೆ, ಇಂಧನ ವೈವಿಧ್ಯೀಕರಣ ಮತ್ತು ಹೂಡಿಕೆ ವಿನಿಮಯದಲ್ಲಿ ಪರಸ್ಪರ ಹಂಚಿಕೆಯ ಉದ್ದೇಶಗಳನ್ನು ಪೂರೈಸಲು ಸಹಕಾರಿಯಾಗಲಿದೆ. ಸೌದಿ ಅರೇಬಿಯಾಕ್ಕೆ ಪಿಯೂಶ್ ಗೋಯಲ್ ಅವರ ಈ ಭೇಟಿಯು ಆರ್ಥಿಕ, ಸಾಂಸ್ಕೃತಿಕ ಮತ್ತು ಸಮುದಾಯದ ಸಂಬಂಧಗಳನ್ನು ಬಲಪಡಿಸುವ ಭಾರತದ ಬದ್ಧತೆಯನ್ನು ಪುನರುಚ್ಚರಿಸುತ್ತದೆ,

<><*<><>*><>

ಮಹಾರಾಷ್ಟ್ರದ ವಿಧಾನಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ನಿನ್ನೆ ಒಟ್ಟು ೨೮೮ ವಿಧಾನಸಭಾ ಸ್ಥಾನಗಳಿಗೆ ಸುಮಾರು ೮ ಸಾವಿರ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ನವೆಂಬರ್ ೨೦ ರಂದು ನಡೆಯಲಿರುವ ಚುನಾವಣೆಗೆ ಒಟ್ಟು ೭ ಸಾವಿರದ ೯೯೫ ಅಭ್ಯರ್ಥಿಗಳು ಚುನಾವಣಾ ಆಯೋಗಕ್ಕೆ ಒಟ್ಟು ೧೦ ಸಾವಿರದ ೯೦೫ ನಾಮಪತ್ರಗಳನ್ನು ಸಲ್ಲಿಸಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ. ಇಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಉಮೇದುವಾರಿಕೆ ಹಿಂಪಡೆಯಲು ನವೆಂಬರ್ ೪ ಕೊನೆಯ ದಿನವಾಗಿದೆ.

<><*<><>*><>

ಮುಂದಿನ ಮಾರ್ಚ್ ವರೆಗೆ ಪ್ರತಿ ತಿಂಗಳು ೨ ಸಾವಿರದ ೪೦೦ ಕೋಟಿ ರೂಪಾಯಿ ರಾಜಸ್ವ ಸಂಗ್ರಹ ಗುರಿ ಸಾಧಿಸಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೋಂದಣಿ ಮತ್ತು ಮುದ್ರಾಂಕ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಅವರು, ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ೨೦೨೪-೨೫ರ ಸಾಲಿನಲ್ಲಿ ೨೬ ಸಾವಿರ ಕೋಟಿ ರೂಪಾಯಿ ರಾಜಸ್ವ ಸಂಗ್ರಹ ಗುರಿ ಹೊಂದಿದ್ದು, ಅಕ್ಟೋಬರ್ ತಿಂಗಳ ಅಂತ್ಯದವರೆಗೆ ೧೩ ಸಾವಿರದ ೭೨೪ ಕೋಟಿ ರೂಪಾಯಿ ಸಂಗ್ರಹವಾಗಿದೆ ಎಂದರು. ನೋಂದಣಿಯೇತರ ದಾಸ್ತಾವೇಜುಗಳಿಗೆ ಸರಿಯಾದ ಮುದ್ರಾಂಕ ಶುಲ್ಕವನ್ನು ಪಾವತಿಸಿಕೊಂಡು ಹೆಚ್ಚಿನ ರಾಜಸ್ವ ಸಂಗ್ರಹಿಸಬೇಕು. ಹಿಂದಿನ ಸಾಲಿಗಿಂತ ಈ ಅವಧಿಯಲ್ಲಿ ೩೦೮ ಕೋಟಿ ೯೮ ಲಕ್ಷ ರೂಪಾಯಿ ಹೆಚ್ಚುವರಿ ರಾಜಸ್ವ ಸಂಗ್ರಹವಾಗಿದೆ ಎಂದರು. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದ ರಾಜು, ಮುಖ್ಯ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಎಲ್ ಅತೀಕ್, ಸಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಶ್ರೀ ರಾಮನ ಜನ್ಮಭೂಮಿ ಅಯೋಧ್ಯೆಯು ಭವ್ಯವಾದ ದೀಪೋತ್ಸವಕ್ಕೆ ಸಾಕ್ಷಿಯಾಗಲು ಸಿದ್ಧವಾಗಿದೆ. ಇದು ವಿಶ್ವದ ಯಾವುದೇ ನದಿಯ ಘಾಟ್‌ಗಳ ಮೇಲೆ ದೀಪಗಳನ್ನು ಬೆಳಗಿಸುವ ಹಿಂದಿನ ಎಲ್ಲಾ ಗಿನ್ನೆಸ್ ದಾಖಲೆಗಳನ್ನು ಸರಿಗಟ್ಟುವ ನಿರೀಕ್ಷೆಯಿದೆ. ನಿನ್ನೆ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ದೀಪಾವಳಿಯು ಐತಿಹಾಸಿಕವಾದದ್ದು, ಅಯೋಧ್ಯೆಯ ಶ್ರೀರಾಮನ ದೇವಾಲಯವು ಸಾವಿರಾರು ದೀಪಗಳಿಂದ

ಬೆಳಗಲಿದ್ದು, ಆಚರಣೆಗಳನ್ನು ಅಭೂತಪೂರ್ವವಾಗಿಸುತ್ತದೆ ಎಂದು ಹೇಳಿದರು. ಮತ್ತೊಂದೆಡೆ, ಅಯೋಧ್ಯೆಯಲ್ಲಿ ಇಂದು ಭವ್ಯ ದೀಪೋತ್ಸವಕ್ಕೆ ಸಿದ್ಧತೆಗಳು ಭರದಿಂದ ಸಾಗಿವೆ. ಹೊಸ ವಿಶ್ವ ದಾಖಲೆ ನಿರ್ಮಿಸಲು ಪವಿತ್ರ ಸರಯೂ ಘಾಟ್‌ಗಳಲ್ಲಿ ಒಟ್ಟು ೨೮ ಲಕ್ಷ ದೀಪಗಳ ವ್ಯವಸ್ಥೆ ಮಾಡಲಾಗಿದೆ. ಇಂದು ಸಂಜೆ ಮುಖ್ಯ ಕಾರ್ಯಕ್ಕಾಗಿ ಇಡೀ ನಗರವನ್ನು ಸ್ವಚ್ಛಗೊಳಿಸಿ ಅಲಂಕರಿಸಲಾಗುತ್ತಿದೆ. ಅಯೋಧ್ಯೆಯಾದ್ಯಂತ ೩೫ ಲಕ್ಷಕ್ಕೂ ಅಧಿಕ ದೀಪಗಳನ್ನು ಬೆಳಗಿಸುವ ಸಾಧ್ಯತೆ ಇದೆ.

<><*<><>*><>

ಪಿಲಿಫೈನ್ಸ್‌ನಲ್ಲಿ ಕಾಂಗ್ರ್ಯೆ ಚಂಡಮಾರುತ ಅಪ್ಪಳಿಸಿದ್ದು, ಭಾರೀ ಪ್ರಮಾಣದಲ್ಲಿ ಮಳೆಯಾಗುತ್ತಿದೆ. ಇದು ಸೂಪರ್ ಚಂಡಮಾರುತವಾಗಿ ಪರಿವರ್ತಿಗೊಳ್ಳುವ ಭೀತಿ ಸೃಷ್ಟಿಸಿದೆ. ಇದೇ ಸಮಯದಲ್ಲಿ ಹಿಂದಿನ ಟ್ರಾಮಿ ಚಂಡಮಾರುತ್ತದಲ್ಲಿ ೧೨೫ ಮಂದಿ ಮೃತಪಟ್ಟಿದ್ದರು. ೨೮ ಮಂದಿ ಇನ್ನೂ ಪತ್ತೆಯಾಗಿಲ್ಲ.

<><*<><>*><>

ಅಮಹದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮಹಿಳಾ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಭಾರತ, ನ್ಯೂಜಿಲೆಂಡ್ ವಿರುದ್ಧ ಗೆಲುವು ಸಾಧಿಸಿ, ಸರಣಿಯನ್ನು ೨-೧ ಅಂತರದಲ್ಲಿ ಕೈವಶ ಮಾಡಿಕೊಂಡಿದೆ. ೨೩೩ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿ ಭಾರತ, ೪೫ ಓವರ್‌ಗಳಲ್ಲಿ ವಿಜಯ ಪತಾಕೆ ಹಾರಿಸಿತು. ಸ್ಮೃತಿ ಮಂದಾನ ಆಕರ್ಷಕ ಶತಕ ಸಿಡಿಸಿದರು. ಮೊದಲ ಬ್ಯಾಟ್ ಮಾಡಿದ ನ್ಯೂಜಿಲೆಂಡ್ ೪೯.೫ ಓವರ್‌ಗಳಲ್ಲಿ ೨೩೨ ರನ್ ಗಳಿಸಿತು. ಕಿವಿಸ್ ಪರ ಬ್ರೂಕೆ ಹಾಲಿಡೇ ೮೬ ರನ್ ಗಳಿಸಿ ಪ್ರವಾಸಿ ತಂಡಕ್ಕೆ ನೆರವಾದರು. ಭಾರತದ ಪರ ದೀಪ್ತಿ ಶರ್ಮಾ ೩ ವಿಕೆಟ್ ಉರುಳಿಸಿ ಗಮನ ಸೆಳೆದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಗಂಟೆಗೆ <>*><>**